





ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ಮುಂಬರುವ ಡಿಸೆಂಬರ್ ತಿಂಗಳಲ್ಲಿ ಜರುಗಲಿರುವ ಅಧಿವೇಶನದ ಸಂಬಂಧ ಪೂರ್ವಭಾವಿ ಸಿದ್ಧತೆಗಳ ಕುರಿತು ಮಾಹಿತಿಯನ್ನು ಪಡೆದುಕೊಳ್ಳಲು ದಿನಾಂಕ.೧೮.೧೦.೨೦೨೪ ರಂದು ಬೆಳಿಗ್ಗೆ ೧೦.೩೦ ಕ್ಕೆ ಬೆಳಗಾವಿ ಸುವರ್ಣ ವಿಧಾನ ಸೌಧದಲ್ಲಿ ಜಿಲ್ಲಾಡಳಿತದೊಂದಿಗೆ ಹಾಗೂ ಸಂಬಂಧ ಪಟ್ಟ ಅಧಿಕಾರಿಗಳೊಂದಿಗೆ ಕರ್ನಾಟಕ ವಿಧಾನ ಪರಿಷತ್ತಿನ **ಮಾನ್ಯ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ** ಹಾಗೂ ಮಾನ್ಯ ವಿಧಾನ ಸಭಾಧ್ಯಕ್ಷರಾದ **ಶ್ರೀ ಯು.ಟಿ. ಖಾದರ್ ಫರೀದ್** ಅವರು ಸಭೆ ನಡೆಸಿ ಸೂಕ್ತ ಸಲಹೆ ಸೂಚನೆಗಳನ್ನು ನೀಡಿದರು.  ಈ ಸಂರ್ಭದಲ್ಲಿ ವಿಧಾನ ಪರಿಷತ್ತಿನ ಕಾರ್ಯದರ್ಶಿ **ಶ್ರೀಮತಿ ಕೆ.ಆರ್ ಮಹಾಲಕ್ಷ್ಮೀ,** ವಿಧಾನಸಭೆಯ ಕಾರ್ಯದರ್ಶಿ **ಶ್ರೀಮತಿ ವಿಶಾಲಾಕ್ಷಿ,** ಮಾನ್ಯ ಸಭಾಪತಿಯವರ ಆಪ್ತಕಾರ್ಯದರ್ಶಿಯಾದ **ಶ್ರೀ ಹೆಚ್.ಪಿ ಹರೀಶ್** ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಭಾಗವಹಿಸಿದ್ದರು.